Fax: 08282-256262
E-mail:kuvempuacademic@gmail.com

Phone No - 08282-256149
Website: www.kuvempu.ac.in

# ಕುವೆಂಪು ವಿಶ್ವವಿದ್ಯಾಲಯ

ಶೈಕ್ಷಣಿಕ ವಿಭಾಗ, ವಿಶ್ವವಿದ್ಯಾಲಯ ಕಾರ್ಯಾಲಯ, ಕುವೆಂಪು ಶತಮಾನೋತ್ಸವ ಭವನ,
ಜ್ಞಾನ ಸಹ್ಯಾದ್ರಿ, ಶಂಕರಘಟ್ಟ – 577 451, ಶಿವಮೊಗ್ಗ ಜಿಲ್ಲೆ.

**Re-Accredited by NAAC with "A" Grade, Ranked 73rd place in NIRF-2019 & 45th Place at National Level in SCIMAGO Rankings**

ಸಂಖ್ಯೆ:ಕುವಿ:ಶೈವಿ:ಎಸಿ-4:123ಎ: 369 :2021-22 ದಿನಾಂಕ:24-05-2021.

## ಸುತ್ತೋಲೆ

ವಿಷಯ: ವಿಶ್ವವಿದ್ಯಾಲಯದ ವ್ಯಾಪ್ತಿಯ ಎಲ್ಲಾ ಸ್ನಾತಕ / ಸ್ನಾತಕೋತ್ತರ/ ಬಿ.ಇಡಿ./ ಡಿಪ್ಲೋಮಾ ಕೋರ್ಸ್‌ನ ವಿದ್ಯಾರ್ಥಿಗಳಿಗೆ ಕೋವಿಡ್-19 ಹಿನ್ನೆಲೆಯಲ್ಲಿ ರಜೆ ವಿಸ್ತರಿಸುವ ಕುರಿತು

ಉಲ್ಲೇಖ:
1. ಸರ್ಕಾರದ ಸುತ್ತೋಲೆ ಸಂಖ್ಯೆ:ಆರ್‌ಡಿ/158/ಟಿಎನ್‌ಆರ್/2021-22, ದಿನಾಂಕ:20-04-2021.
2. ಈ ಕಛೇರಿ ಸುತ್ತೋಲೆ ಸಂಖ್ಯೆ:ಕುವಿ:ಶೈವಿ:ಎಸಿ-4:123ಎ: 257 :2021-22 ದಿನಾಂಕ:21-04-2021.
3. ಸರ್ಕಾರದ ಸುತ್ತೋಲೆ ಸಂಖ್ಯೆ:ಆರ್‌ಡಿ/158/ಟಿಎನ್‌ಆರ್/2021-22, ದಿನಾಂಕ:26-04-2021.
4. ವಿ.ವಿ. ಸುತ್ತೋಲೆ ಸಂಖ್ಯೆ:ಕುವಿ:ಮಾಸನಿ-7:353:2021-22, ದಿನಾಂಕ:08-05-2021.
5. ಸರ್ಕಾರದ ಸುತ್ತೋಲೆ ಸಂಖ್ಯೆ:ಆರ್‌ಡಿ/158/ಟಿಎನ್‌ಆರ್/2021-22, ದಿನಾಂಕ:21-05-2021.
6. ಸರ್ಕಾರದ ಸುತ್ತೋಲೆ ಸಂಖ್ಯೆ:ಇಡಿ/167/ಯುಎನ್‌ಇ/2021-22, ದಿನಾಂಕ:21-05-2021.
7. ಮಾನ್ಯ ಕುಲಪತಿಯವರ ಆದೇಶ ದಿನಾಂಕ:24-05-2021.

*****

ಉಲ್ಲೇಖಿತ(4) ರಲ್ಲಿ ಸರ್ಕಾರದ ನಿರ್ದೇಶನದ ಮೇರೆಗೆ ರಾಜ್ಯಾದ್ಯಂತ ಹರಡುತ್ತಿರುವ ಎರಡನೇ ಅಲೆಯ ಕೋವಿಡ್-19 (ಕೊರೊನಾ ವೈರಸ್) ನಿಯಂತ್ರಿಸುವ ದೃಷ್ಟಿಯಿಂದ ವಿಶ್ವವಿದ್ಯಾಲಯದ ವ್ಯಾಪ್ತಿಯ ಎಲ್ಲಾ ಸ್ನಾತಕ / ಸ್ನಾತಕೋತ್ತರ/ ಕೋರ್ಸ್‌ನ ವಿದ್ಯಾರ್ಥಿಗಳಿಗೆ ದಿನಾಂಕ:24-05-2021 ರವರೆಗೆ ರಜೆ ಘೋಷಿಸಲಾಗಿತ್ತು.

ಮುಂದುವರೆದಂತೆ, ಉಲ್ಲೇಖಿತ(5) ಮತ್ತು (6)ರ ಆದೇಶದಲ್ಲಿ ಸರ್ಕಾರವು ಕೋವಿಡ್-19 (ಕೊರೊನಾ ವೈರಸ್) ಪ್ರಕರಣ ಹೆಚ್ಚುತ್ತಿರುವ ಹಿನ್ನೆಲೆಯಲ್ಲಿ ನಿಯಂತ್ರಿಸುವ ದೃಷ್ಟಿಯಿಂದ ದಿನಾಂಕ:07-06-2021 ರವರೆಗೆ ಲಾಕ್‌ಡೌನ್ ಜಾರಿ ಮಾಡಿರುವ ಹಿನ್ನೆಲೆಯಲ್ಲಿ ವಿಶ್ವವಿದ್ಯಾಲಯದ ವ್ಯಾಪ್ತಿಯ ಎಲ್ಲಾ ಸ್ನಾತಕ / ಸ್ನಾತಕೋತ್ತರ/ ಬಿ.ಇಡಿ./ ಡಿಪ್ಲೋಮಾ/ ಪಿಹೆಚ್.ಡಿ. ವಿದ್ಯಾರ್ಥಿಗಳಿಗೆ ದಿನಾಂಕ:06-06-2021 ರವರೆಗೆ ರಜೆ ಮುಂದುವರಿಸಲಾಗಿದೆ.

ಮೇಲ್ಕಂಡ ಅವಧಿಯಲ್ಲಿ ವಿಶ್ವವಿದ್ಯಾಲಯವು ಹೊರಡಿಸಿರುವ ಎಲ್ಲಾ ಶೈಕ್ಷಣಿಕ ವೇಳಾಪಟ್ಟಿಯನುಸಾರ ತರಗತಿಗಳು ಪ್ರಾರಂಭಗೊಂಡಿದ್ದಲ್ಲಿ (ಬೆಸ ಸೆಮಿಸ್ಟರ್‌ನ ಪರೀಕ್ಷೆಗಳು ನಡೆಯದಿದ್ದರು ಸಹ) ಸಮ ಸೆಮಿಸ್ಟರ್ ತರಗತಿಗಳಿಗೆ ಆನ್‌ಲೈನ್ ಮೂಲಕ ತರಗತಿಗಳನ್ನು ನಡೆಸುವಂತೆ ಎಲ್ಲಾ ಅಧ್ಯಾಪಕರುಗಳಿಗೆ ತಿಳಿಸಲಾಗಿದೆ.

ಆನ್‌ಲೈನ್ ತರಗತಿಗಳ ಕುರಿತು ವಿದ್ಯಾರ್ಥಿಗಳಿಂದ ಯಾವುದೇ ರೀತಿಯ ಸಮಸ್ಯೆಗಳು ಬಂದಲ್ಲಿ ಆಯಾ ವಿಭಾಗದ ಮುಖ್ಯಸ್ಥರು ಹಾಗೂ ಪ್ರಾಚಾರ್ಯರುಗಳೆ ಬಗೆಹರಿಸಿ ಆನ್‌ಲೈನ್ ತರಗತಿಗಳು ಸುಗಮವಾಗಿ ನಡೆಯುವಂತೆ ಕ್ರಮ ಕೈಗೊಳ್ಳಲು ಈ ಮೂಲಕ ಎಲ್ಲಾ ಸ್ನಾತಕ / ಬಿ.ಇಡಿ./ ಸ್ನಾತಕೋತ್ತರ ವಿಭಾಗಗಳ ಮುಖ್ಯಸ್ಥರಿಗೆ ಮತ್ತು ಪ್ರಾಚಾರ್ಯರುಗಳಿಗೆ ಸೂಚಿಸಲಾಗಿದೆ. ಈ ಸಂಬಂಧ ಎಲ್ಲಾ ಸ್ನಾತಕೋತ್ತರ ಅಧ್ಯಾಪಕರುಗಳು ಆನ್‌ಲೈನ್ ಮುಖಾಂತರ ನಡೆಸಿದ ಪಾಠಗಳ ವರದಿಯನ್ನು ಕುಲಪತಿಯವರಿಗೆ ಮತ್ತು ಕುಲಸಚಿವರಿಗೆ ವ್ಯಾಟ್ಸಪ್ ಲಿಂಕ್ ಮುಖಾಂತರ ಹಂಚಿಕೊಳ್ಳುವಂತೆ ಈ ಮೂಲಕ ತಿಳಿಸಲಾಗಿದೆ.

ಕುಲಸಚಿವರು

ಕುಲಸಚಿವರು
ಕುವೆಂಪು ವಿಶ್ವವಿದ್ಯಾನಿಲಯ
ಜ್ಞಾನ ಸಹ್ಯಾದ್ರಿ,
ಶಂಕರಘಟ್ಟ-577451
24/5

ಗೆ,

1. ಎಲ್ಲಾ ಸ್ನಾತಕೋತ್ತರ ಅಧ್ಯಯನ ವಿಭಾಗಗಳ ಮುಖ್ಯಸ್ಥರು/ ಸಂಯೋಜನಾಧಿಕಾರಿಗಳು, ಕುವೆಂಪು ವಿಶ್ವವಿದ್ಯಾಲಯ, ಶಂಕರಘಟ್ಟ/ ಶಿವಮೊಗ್ಗ/ ಕಡೂರು/ ಚಿಕ್ಕಮಗಳೂರು.
2. ನಿರ್ದೇಶಕರು, ಸ್ನಾತಕೋತ್ತರ ಕೇಂದ್ರ, ಕುವೆಂಪು ವಿಶ್ವವಿದ್ಯಾಲಯ, ಕಡೂರು/ ಚಿಕ್ಕಮಗಳೂರು.
3. ವಿಶ್ವವಿದ್ಯಾಲಯದ ಎಲ್ಲಾ ಸಂಯೋಜಿತ ಸ್ನಾತಕ /ಬಿ.ಇಡಿ. ಕಾಲೇಜುಗಳ ಪ್ರಾಂಶುಪಾಲರುಗಳಿಗೆ ಹಾಗೂ ಘಟಕ ಕಾಲೇಜುಗಳು, ಶಿವಮೊಗ್ಗ ಮತ್ತು ನೇರ ಆಡಳಿತಕ್ಕೊಳಪಟ್ಟ ಕಾಲೇಜು, ಶಂಕರಘಟ್ಟ.

ಪ್ರತಿಗಳು:

1. ಆಪ್ತ ಸಹಾಯಕರು, ಕುಲಪತಿಗಳು: ಕುಲಸಚಿವರು: ಕುಲಸಚಿವರು(ಪ): ಹಣಕಾಸು ಅಧಿಕಾರಿಗಳು, ಕುವೆಂಪು ವಿಶ್ವವಿದ್ಯಾಲಯ, ಶಂಕರಘಟ್ಟ.
2. ಕಛೇರಿ ಪ್ರತಿ.